ಈ) ಇಲ್ಲ

ಉ) ಹಣಕಾಸಿನ ಲಭ್ಯತೆಯ ಮೇರೆಗೆ ಹಂತ ಹಂತವಾಗಿ ಎಲ್ಲಾ ನೊಂದಾಯಿತ ಫಲಾನುಭವಿಗಳಿಗೆ ವಸತಿ ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

ವಿವಿಧ ಯೋಜನೆಗಳಲ್ಲಿನ ಮನೆಗಳ ನಿರ್ಮಾಣದಲ್ಲಿನ ತೊಂದರೆ

4520 (4806) : ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಇಂದಿರಾ ಆವಾಸ್ ಮತ್ತು ಅಂಬೇಡ್ಕರ್ ಯೋಜನೆಯಡಿಯಲ್ಲಿ ಫಲಾನುಭವಿಯಾಗಿ ಆಯ್ಕೆಯಾಗುವವರಿಗೆ ಜಮೀನಿನ ದಾಖಲೆ ಬೇಕೆಂದು ಸರ್ಕಾರ ಕಡ್ಡಾಯಗೊಳಿಸಿದೆಯೇ;

ಆ) ಇಲ್ಲವಾದಲ್ಲಿ ಈ ಕುರಿತು ಸೂಕ್ತ ಆದೇಶವನ್ನು ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್‌ಗಳಿಗೆ ನೀಡಲಾಗುವುದೇ;

ಇ) ಆಶ್ರಯ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದವರು ಫಲಾನುಭವಿಯಾಗಿ ಆಯ್ಕೆಯಾಗಿ ಜಮೀನಿನ ದಾಖಲೆ ಇಲ್ಲದೆ ಮನೆ ನಿರ್ಮಿಸಿಕೊಳ್ಳಲು ಆಗದೇ ನಿಗದಿಪಡಿಸಲಾದ ಗುರಿಗಳು ಹಾಗೆಯೇ ಉಳಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಜಮೀನಿನ ದಾಖಲಾತಿ ಇಲ್ಲದೆ ಇರುವವರಿಗೆ ಮನೆ ನಿರ್ಮಿಸಿಕೊಳ್ಳುವಲ್ಲಿ ಸರ್ಕಾರದ ನಿಲುವೇನು?

ಶ್ರೀ ಸಿ.ಆರ್. ಸಗೀರ್ ಅಹ್ಮದ್ (ವಸತಿ ಸಚಿವರು)

ಅ) ಈ ಬಗ್ಗೆ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮವು ಷರತ್ತಿನಲ್ಲಿ ವಿಧಿಸಿರುವುದು ಸರಕಾರದ ಗಮನಕ್ಕೆ ಬಂದಿದೆ.

ಆ) ಮೇಲ್ಕಂಡಂತೆ, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮವು ಈಗಾಗಲೇ ಆದೇಶ ಹೊರಡಿಸಿದೆ.

ಇ) ಇಲ್ಲ,

ಈ) ಆಶ್ರಯ ಮತ್ತು ಅಂಬೇಡ್ಕರ್ ಮನೆಗಳನ್ನು ಕಟ್ಟಲು ನಿವೇಶನವು ಫಲಾನುಭವಿಗಳ ಹೆಸರಿನಲ್ಲಿ ಇರುವುದು ಕಾನೂನಿನ ಪ್ರಕಾರ ಪ್ರಾಥಮಿಕ ಅವಶ್ಯಕತೆಯಾಗಿದೆ. ಅದಿಲ್ಲದೆ ಸದರಿ ಮನೆಯ ಮೇಲಿನ ಫಲಾನುಭವಿಯ ಮಾಲೀಕತ್ವವನ್ನು ಸಾಬೀತು ಮಾಡಲು ಆಗುವುದಿಲ್ಲ. ಮನೆಯ ಮಾಲೀಕತ್ವವು ಸಾಬೀತು ಆಗದಿದ್ದರೆ ಅದು ಫಲಾನುಭವಿಗೇ ಕಷ್ಟವಾಗುತ್ತದೆ. ಆದ್ದರಿಂದ ಫಲಾನುಭವಿಯ ಹಿತದೃಷ್ಟಿಯಿಂದ ನಿವೇಶನವು ಫಲಾನುಭವಿಯ ಹೆಸರಿನಲ್ಲಿರಬೇಕೆಂದು ತೀರ್ಮಾನಿಸಲಾಗಿದೆ.

ಹುಬ್ಬಳ್ಳಿ-ಧಾರವಾಡ ಮಹಾನಗರ ವ್ಯಾಪ್ತಿಯಲ್ಲಿ ನಿರ್ಮಲ ಜ್ಯೋತಿ ಯೋಜನೆ

4521 (5163) : ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 2003-04ನೇ ಸಾಲಿನಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ಮಲ ಜ್ಯೋತಿ ಯೋಜನೆಯಡಿಯಲ್ಲಿ ಇದ್ದ ಕೊಳಚೆ ಪ್ರದೇಶಗಳು ಯಾವುವು;